ಅ) *ಈ ಕಟ್ಟಡದ ನಿರ್ಮಾಣದ ಕಾಮಗಾರಿಯು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಹಾಗಿದ್ದಲ್ಲಿ ಇದಕ್ಕೆ ಕಾರಣವೇನು?*

ಇ) *ಈ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸಾರ್ವಜನಿಕರಿಗೆ ಆರೋಗ್ಯ ಸೌಲಭ್ಯ ಒದಗಿಸಲು ಸರ್ಕಾರ ಕೈಗೊಳ್ಳಲು ಉದ್ದೇಶಿಸಿರುವ ಕ್ರಮಗಳೇನು?*

ಡಾ॥ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹೌದು.

ಆ) ವಿಳಂಬವಾಗಿರುವುದಿಲ್ಲ.

ಇ) ಕಟ್ಟಡದ ಕೆಲಸವನ್ನು ನಿರ್ದೇಶಕರು, ಭೂಸೇನಾ ನಿಗಮ ಇವರಿಗೆ ವಹಿಸಿಕೊಟ್ಟಿದ್ದು 3 ತಿಂಗಳಲ್ಲಿ ಪೂರ್ತಿಗೊಳಿಸಿ ಆರೋಗ್ಯ ಇಲಾಖೆಗೆ ವಹಿಸಿ ಕೊಡುವುದಾಗಿ ತಿಳಿಸಿದ್ದಾರೆ.

ಸದಲಗಾ ಮತಕ್ಷೇತ್ರದ ಸರ್ಕಾರಿ ಪ್ರೌಢ ಶಾಲೆಗಳು.

1591 - ಶ್ರೀ ಪ್ರಕಾಶ್ ಬಿ. ಹುಕ್ಕೇರಿ (ಸದಲಗಾ) : ಮಾನ್ಯ ಪ್ರಾಥಮಿಕ, ಪ್ರೌಢ ಹಾಗೂ ಉನ್ನತ ಶಿಕ್ಷಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಸದಲಗಾ ಮತಕ್ಷೇತ್ರದಲ್ಲಿರುವ ಸರ್ಕಾರಿ ಪ್ರೌಢಶಾಲೆಗಳೆಷ್ಟು? ಈ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳೆಷ್ಟು? (ಗ್ರಾಮವಾರು ಪ್ರತ್ಯೇಕ ವಿವರ ನೀಡುವುದು)*

ಆ) *ಹುದ್ದೆಗಳು ಖಾಲಿ ಇರುವುದರಿಂದ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುವುದೇ?*

ಇ) *ಹಾಗಿದ್ದಲ್ಲಿ ಈ ಹುದ್ದೆಗಳು ತುಂಬಲು ಸರ್ಕಾರಕ್ಕೆ ಬೇಕಾಗುವ ಕಾಲಾವಕಾಶ ಎಷ್ಟು?*

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ, ಪ್ರೌಢ ಹಾಗೂ ಉನ್ನತ ಶಿಕ್ಷಣ ಸಚಿವರು) :

ಅ) ಸರ್ಕಾರಿ ಪ್ರೌಢಶಾಲೆಗಳು - 7

ಖಾಲಿ ಇರುವ ಹುದ್ದೆಗಳ ವಿವರ

1)	ಸದಲಗಾ	-	3
2)	ಶಿರದ್ವಾಡ	-	3
3)	ನೇಜಿ	-	2
4)	ಹೊನ್ನರಗಿ	-	3
5)	ಶಿರಗಾವ	-	2
6)	ಸಾಗರಮುನ್ನೊಳ್ಳಿ	-	2
7)	ಕಲ್ಲೋಳ	-	2
	ಒಟ್ಟು		**17 ಹುದ್ದೆಗಳು**

ಅ) ಬಂದಿದೆ.

ಇ) ಖಾಲಿ ಬಿದ್ದಿರುವ 17 ಹುದ್ದೆಗಳ ಪೈಕಿ 11 ಶಿಕ್ಷಕರ ಹುದ್ದೆಗಳನ್ನು ನೇರ ನೇಮಕಾತಿ ಹಾಗೂ ಬಡ್ತಿಯ ಮೂಲಕ ತುಂಬಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ. ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಲಾಗುತ್ತಿದ್ದು, ಖಾಲಿ ಇರುವ ಉಳಿದ 6 ವೃತ್ತಿ ಶಿಕ್ಷಕರ ಹುದ್ದೆಗಳನ್ನು ಆ ನಂತರ ತುಂಬಲಾಗುವುದು.

ಉಡುಪಿ ಜಿಲ್ಲೆಯಲ್ಲಿನ ಪೋಸ್ಟ್‌ಮಾರ್ಟಂ ಸೆಂಟರ್ ಬಗ್ಗೆ.

1592 - ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉಡುಪಿ ಜಿಲ್ಲೆಯಲ್ಲಿ ಪೋಸ್ಟ್‌ಮಾರ್ಟಂ ಕೊಠಡಿ ಇಲ್ಲದೆ ಪ್ರಾಥಮಿಕ ಆರೋಗ್ಯ ಕೇಂದ್ರಗಳಾವುವು?

ಆ) ಈ ಆರೋಗ್ಯ ಕೇಂದ್ರಗಳಲ್ಲಿ ಪೋಸ್ಟ್‌ಮಾರ್ಟಂ ಕೊಠಡಿಗಳ ಅವಶ್ಯಕತೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಸರ್ಕಾರವು ಈ ಬಗ್ಗೆ ಕೈಗೊಳ್ಳಲಿರುವ ಕ್ರಮಗಳೇನು?

ಡಾ|| ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) 30 ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಶವಾಗಾರ ಕೊಠಡಿ ಇರುವುದಿಲ್ಲ. ಪಟ್ಟಿ ಲಗತ್ತಿಸಿದೆ.

ಆ) ಬಂದಿದೆ.

ಇ) ಪ್ರಸಕ್ತ ಸಾಲಿನಲ್ಲಿ ಉಡುಪಿ ಜಿಲ್ಲೆಯ 6 ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಪೋಸ್ಟ್‌ಮಾರ್ಟಂ ಕೊಠಡಿಗಳನ್ನು ಒದಗಿಸಲಾಗಿದ್ದು 11 ಪ್ರಾಥಮಿಕ ಆರೋಗ್ಯ ಕೇಂದ್ರಗಳ ಶವಾಗಾರಗಳು ನಿರ್ಮಾಣ ಹಂತದಲ್ಲಿವೆ. ಉಳಿದವುಗಳಿಗೆ ಹಂತ ಹಂತವಾಗಿ ನಿರ್ಮಾಣಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು.